ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 31–08–2018**

## ಮಾಧ್ಯಮ ಆಮಂತ್ರಣ

**1. ರಾಜೀವ್ ಗಾಂಧಿ ವಸತಿ ನಿಗಮ**
**ಸ್ಪಂದನ– ವಸತಿ ಸಹಾಯವಾಣಿ ಕೇಂದ್ರ**

**ಉದ್ಘಾಟನೆ:**
**ಯು.ಟಿ. ಖಾದರ್, ನಗರಾಭಿವೃದ್ಧಿ ಮತ್ತು ಸಚಿವರು**

**ದಿನಾಂಕ: 01–09–2018, ಶನಿವಾರ, ಸಮಯ: ಬೆಳಿಗ್ಗೆ 10–00 ಗಂಟೆಗೆ**
**ಸ್ಥಳ: ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ, 8 ನೇ ಮಹಡಿ, ಕಾವೇರಿ ಭವನ, ಬೆಂಗಳೂರು.**

## ಪತ್ರಿಕಾ ಪ್ರಕಟಣೆ

**ಸಂಖ್ಯೆ: 917/1017**

### ಕನ್ನಡ ಮತ್ತು ಸಂಸ್ಕೃತಿ ಸಚಿವರ ಕಛೇರಿ ನೂತನ ಕೊಠಡಿ ಹಾಗೂ ದೂರವಾಣಿ ಸಂಖ್ಯೆ

ಬೆಂಗಳೂರು, ಆಗಸ್ಟ್ 31, (ಕರ್ನಾಟಕ ವಾರ್ತೆ) :

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಮತ್ತು ಹಿರಿಯ ನಾಗರೀಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಡಾ. ಜಯಮಾಲ ಅವರ ಕಛೇರಿಯ ನೂತನ ದೂರವಾಣಿ ಸಂಖ್ಯೆ, ಇ–ಮೇಲ್ ಮತ್ತು ವಿಳಾಸ ಬದಲಾಗಿದೆ.**

ದೂರವಾಣಿ ಸಂಖ್ಯೆ : 080–22255282 ಅಥವಾ 080–22033469 ಇ–ಮೇಲ್ : ministerforwcd@gmail.com ವಿಳಾಸ: ಕೊಠಡಿ ಸಂಖ್ಯೆ : 252/253ಎ, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.

## Know Your Stars

Bengaluru, August 31, (Karnataka Information)

Bangalore association for Science Education (BASE) announces a special demonstration lecture and sky gazing entitled KNOW YOUR STARS at the Jawaharlal Nehru Planetarium on Sunday 2nd September 2018 at 6-30 p.m. at Jawaharlal Nehru Planetarium, Sri T. Chowdaiah Road, High Grounds, Bengaluru-560 00.

Further details may be obtained from Jawaharlal Nehru Planetarium on 2237 9725 / 22266084 Or visit website http://www.taralaya.org/monthly-sky-chart.php says official press release.

## ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಾಮನ್ಯ ಸಭೆ

ಬೆಂಗಳೂರು, ಆಗಸ್ಟ್ 31, (ಕರ್ನಾಟಕ ವಾರ್ತೆ) :

ಜಿಲ್ಲಾ ಪಂಚಾಯತ್ ಕಾಮಗಾರಿಗಳನ್ನು ಆಯಾಯ ಕ್ಷೇತ್ರದ ಸದಸ್ಯರು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಹಾಗೂ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಬೇಕು, ಸಾರ್ವಜನಿಕರು ಸಹ ಕಾಮಗಾರಿಗಳ ಕುರಿತು ದೂರುಗಳಿದ್ದಲ್ಲಿ ಜನ ಪ್ರತಿನಿಧಿಗಳ ಹಾಗೂ ಅಧಿಕಾರಿಗಳ ಗಮನಕ್ಕೆ ತರುವ ಜವಾಬ್ದಾರಿಯನ್ನು ಮೆರೆಯಬೇಕು ಎಂದು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಅಧ್ಯಕ್ಷ ಮುನಿರಾಜು ಅವರು ತಿಳಿಸಿದರು.

ಅವರು ಇಂದು ನಗರದ ಬನಶಂಕರಿಯ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪ್ರಸಕ್ತ ಸಾಲಿನ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಮಾತನಾಡಿದರು. ಅಧಿಕಾರಿಗಳನ್ನು ರೈತರ ಬಳಿ ಕರೆದುಕೊಂಡು ಹೋಗಿ ಯೋಜನೆಗಳ ಕುರಿತು ಮಾಹಿತಿ ಪಡೆಯಲು ಸೂಚಿಸಿದರು.

ರೈತರಿಗೆ ರೈತ ಸಂಪರ್ಕ ಕೇಂದ್ರಗಳಲ್ಲಿ ವಿತರಿಸಿರುವ ಯಂತ್ರೋಪಕರಣಗಳ ಬಗ್ಗೆ ಮುಂದಿನ ಸಭೆಯಲ್ಲಿ ಮಾಹಿತಿ ನೀಡುವಂತೆ ಸೂಚಿಸಿದರು.

ಗ್ರಾಮ ಸಭೆಯನ್ನು ಏರ್ಪಡಿಸುವಾಗ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿಗಳು ಸಂಬಂಧಪಟ್ಟ ಸದಸ್ಯರೊಂದಿಗೆ ಸಮನ್ವಯ ಮಾಡಿ ಗ್ರಾಮ ಪಂಚಾಯಿತಿ ಸಭೆಗಳನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ, ಬೆಂಗಳೂರು ದಕ್ಷಿಣ ವಿಭಾಗದಲ್ಲಿ ಸರ್ಕಾರಿ ಶಾಲೆಗೆ ಮೀಸಲಿರುವ ಜಾಗವನ್ನು ಅನಧಿಕೃತ ಒತ್ತುವರಿ ಮಾಡಿಕೊಂಡಿದ್ದು, ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಅಧ್ಯಕ್ಷರು ತಿಳಿಸಿದರು.

ಕಳೆದ ಸಭೆಯಲ್ಲಿ ಡೆಸ್ಕ್ ಅಭಾವ ಇರುವ ಶಾಲೆಗಳಿಗೆ ಡೆಸ್ಕ್ ವಿತರಣೆಗೆ ಅಧ್ಯಕ್ಷರು ಸೂಚಿಸಿದ್ದು, ಹೈಸ್ಕೂಲುಗಳಿಗೆ ಪ್ರಾಮುಖ್ಯತೆ ನೀಡಿ, ಅಂತಹ ಶಾಲೆಗಳಲ್ಲಿ ವಿತರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಪ್ರಸಕ್ತ ಶೈಕ್ಷಣಿಕ ವರ್ಷದ ಅರ್ಧವಾರ್ಷಿಕ ಹತ್ತಿರ ಬರುತ್ತಿದ್ದರೂ ಶಾಲಾ ಸಮವಸ್ತ್ರ ಹಾಗೂ ಸೈಕಲ್‌ಗಳು ಮಕ್ಕಳಿಗೆ ಇನ್ನೂ ವಿತರಣೆಯಾಗದಿರುವ ಬಗ್ಗೆ ಅಧ್ಯಕ್ಷರು ಅಸಮದಾನ ವ್ಯಕ್ತಪಡಿಸಿದರು.

ಕೃಷಿ ಇಲಾಖೆಗೆ ಸಂಬಂಧಿಸಿದಂತೆ, ಮಾಹಿತಿ ನೀಡಿದ ಜಂಟಿ ನಿರ್ದೇಶಕರು ಪ್ರಸಕ್ತ ಸಾಲಿನಲ್ಲಿ ಆನೇಕಲ್ ತಾಲ್ಲೂಕಿನಲ್ಲಿ 23000 ಹೆಕ್ಟೇರ್‌ಗೆ 13000 ಹೆಕ್ಟೇರ್ ಮಾತ್ರ ಬಿತ್ತನೆಯಾಗಿದೆ. ಜುಲೈ, ಆಗಸ್ಟ್ ತಿಂಗಳಿನಲ್ಲಿ ಕಡಿಮೆ ಮಳೆಯಾದ ಕಾರಣ ಸಮಗ್ರವಾಗಿ ಬಿತ್ತನೆಯಾಗದಿರುವುದನ್ನು ಸಭೆಯ ಗಮನಕ್ಕೆ ತಂದರು.

ರೈತರಿಗೆ ಬಿತ್ತನೆ ಬೀಜವನ್ನು, ರಸಗೊಬ್ಬರವನ್ನು ಸಕಾಲದಲ್ಲಿ ಪೂರೈಸಿದ್ದು, ಕೊರತೆ ಇಲ್ಲ ಎಂದು ತಿಳಿಸಿರು. ಮಳೆಗೆ ಅನುಗುಣವಾಗಿ ಪ್ರಸಕ್ತ ತಿಂಗಳಿನಲ್ಲಿ ಉಳಿದ ಪ್ರದೇಶಗಳು, ಬಿತ್ತನೆಗೊಳ್ಳುವ ಭರವಸೆಯನ್ನು ಅವರು ನೀಡಿದರು. ಆನೇಕಲ್ ತಾಲ್ಲೂಕಿನಲ್ಲಿ ಮಳೆ ಅಭಾವದಿಂದ ರಾಗಿ ಬೆಳೆ ಒಣಗುತ್ತಿರುವ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ್ ಸದಸ್ಯರು ಫಜಲ್ ಭೀಮಾ ಯೋಜನೆ ಬಗ್ಗೆ ಗ್ರಾಮ ಪಂಚಾಯತ್ ಮಟ್ಟದಲ್ಲಿ ಪ್ರಚಾರ ಮಾಡಬೇಕು ಎಂದು ಒತ್ತಾಯಿಸಿದರು.

ಬೆಂಗಳೂರು ನಗರ ಜಿಲ್ಲೆಯಲ್ಲಿ ಸುಮಾರು 11100 ರೈತರು ಫಜಲ್ ಭೀಮಾ ಯೋಜನೆ ಪ್ರಯೋಜನ ಪಡೆದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದರು.

ಜೇನು ಕೃಷಿ ಸ್ಥಾಪನೆ ಕುರಿತು ತಾಲ್ಲೂಕುವಾರು ಎಷ್ಟು ರೈತರಿಗೆ ತರಬೇತಿ ನೀಡಲಾಗಿದೆ. ಫಲಾನುಭವಿ ಫಲಾನುಭವಿಗಳ ಆಯ್ಕೆಯ ಬಗ್ಗೆ ಹಾಗೂ ಈವರೆಗೆ ಎಷ್ಟು ಜೇನು ಪೆಟ್ಟಿಗೆಗಳನ್ನು ವಿತರಿಸಲಾಗಿದೆ ಎಂಬುದರ ಕುರಿತು ತೋಟಗಾರಿಕಾ ಇಲಾಖೆ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಹಸಿರು ಮನೆ ಯೋಜನೆಗೆ ಶೇ 50 ರಷ್ಟು ಸಹಾಯಧನ, ಹನಿ ನೀರಾವರಿ ಯೋಜನೆಯಡಿ ಶೇ 90 ಸಹಾಯಧನ ನೀಡುತ್ತಿದ್ದು, ಈ ಬಗ್ಗೆ ಗ್ರಾಮ ಸಭೆಗಳಲ್ಲಿಯೂ ಮಾಹಿತಿ ನೀಡಲಾಗುತ್ತಿದೆ ಎಂಬುದನ್ನು ತಿಳಿಸಿದರು.

ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯು ಯುವ ಚೈತನ್ಯ ಕಾರ್ಯಕ್ರಮದ ಮೂಲಕ ಕ್ರೀಡಾ ಕಿಟ್‌ಗಳನ್ನು ವಿತರಿಸುತ್ತಿದ್ದು, ಈವರೆಗೂ ವಿತರಣೆಯಲ್ಲಿ ವಿಳಂಬವಾಗುತ್ತಿದ್ದು, ಸಕಾಲದಲ್ಲಿ ಅದನ್ನು ಪೂರೈಸುವುದಾಗಿ ಅಧಿಕಾರಿಗಳು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ಸಿ. ಮುನಿರಾಜು, ಉಪಾಧ್ಯಕ್ಷರಾದ ಪಾರ್ವತಿ ಚಂದ್ರಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶ್ರೀಮತಿ ಅರ್ಚನ ಹಾಗೂ ಸಾಯಿ ಸಮಿತಿ ಅಧ್ಯಕ್ಷರೂ ಸೇರಿದಂತೆ ಸದಸ್ಯರುಗಳು ಭಾಗವಹಿಸಿದ್ದರು.